## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಡಿ.ಎಸ್.ಅರುಣ್ ರವರ ಶೂನ್ಯ ವೇಳೆಯ ಪ್ರಸ್ತಾವಕ್ಕೆ ಉತ್ತರ.

ಪ್ರಶ್ನೆ : ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ತರುವಾಯ ಉದ್ದೇಶಪೂರ್ವಕವಾಗಿ ಬಿಜೆಪಿ ಕಾರ್ಯಕರ್ತರನ್ನು ಗುರಿಯಾಗಿಸಿಕೊಂಡು ಹಲ್ಲೆ ಮಾಡುವವರಿಗೆ ಕುಮ್ಮಕ್ಕು ನೀಡುತ್ತಿರುವಂತಹ ಪ್ರಕರಣಗಳು ಹೆಚ್ಚಾಗಿದ್ದು, ನಿನ್ನೆ ದಿನ ಭದ್ರಾವತಿಯಲ್ಲಿ ಬಿಜೆಪಿ ಯುವಮೋರ್ಚಾ ಕಾರ್ಯಕರ್ತ ಗೋಕುಲ್ ಮೇಲೆ ನಡೆದಿರುವ ಮಾರಣಾಂತಿಕ ಹಲ್ಲೆ ಇದಕ್ಕೆ ತಾಜಾ ಉದಾಹರಣೆಯಾಗಿದ್ದು, ಅತ್ಯಂತ ಆತಂಕಕಾರಿ ವಿಷಯದ ಬಗ್ಗೆ ದಿನಾಂಕ: 11.12.2023ರ ಪತ್ರಿಕೆಗಳಲ್ಲಿ ವರದಿಯಾಗಿದೆ.

ಕಲಬುರ್ಗಿಯ ಚಿಂಚೋಳಿ ತಾಲ್ಲೂಕಿನ ಶಿರೋಳ್ಳಿ ಗ್ರಾಮದ ಪಕ್ಷದ ಮುಖಂಡ ಶಿವಕುಮಾರ್ ಅವರ ಪ್ರಕರಣ ಇರಬಹುದು, ರುದನೂರು ಗ್ರಾಮದ ಬಿಜೆಪಿ ಮುಖಂಡ ಮಲ್ಲಿಕಾರ್ಜುನ್ ರುದನೂರು ಅವರ ಮೇಲೆ ನಡೆದ ಮಾರಣಾಂತಿಕ ಹಲ್ಲೆ ಪ್ರಕರಣ ಇರಬಹುದು, ಅದೇ ರೀತಿ ಬೆಳಗಾವಿಯ ಪ್ರಕರಣ ಇರಬಹುದು ಹೀಗೆ ಸಾಲು ಸಾಲಾಗಿ ಉದ್ದೇಶಪೂರ್ವಕವಾಗಿ ಬಿಜೆಪಿ ಕಾರ್ಯಕರ್ತರವನ್ನು ಗುರಿಯಾಗಿಸಿಕೊಂಡು ಅಟ್ಯಾಕ್ ಮಾಡುವಂತಹ ಸಂಸ್ಕೃತಿ ಈ ಸರ್ಕಾರದ ಅವಧಿಯಲ್ಲಿ ಹೆಚ್ಚಾಗುತ್ತಿದೆ.

ಭದ್ರಾವತಿಯಲ್ಲಿ ನಡೆಯುತ್ತಿರುವ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕದೇ ಅದನ್ನು ಪೋಷಣೆ ಮಾಡುತ್ತಿರುವವರ ವಿರುದ್ಧ ಜಾಲತಾಣದಲ್ಲಿ ಗೋಕುಲ್ ಕೃಷ್ಣನ್ ಪ್ರಶ್ನೆ ಮಾಡಿದ್ದೆ ಈ ದಾಳಿಗೆ ಕಾರಣ ಎಂಬುದು ತಿಳಿದು ಬಂದಿರುತ್ತದೆ. ಅಧಿಕಾರಸ್ಥರ ಅಕ್ರಮಗಳ ವಿರುದ್ಧ ಧ್ವನಿ ಎತ್ತುವವರನ್ನು ಗುರಿಯಾಗಿಸಿಕೊಂಡು ಹಲ್ಲೆ ನಡೆಸುವುದು ಎಷ್ಟು ಸರಿ?

ಕ್ಷೇತ್ರದ ಶಾಸಕರು ಚುನಾವಣೆಯಲ್ಲಿ ಗೆಲ್ಲುವ ಮೊದಲು ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ತಕ್ಷಣ ಎಂಪಿಎಂ ಕಾರ್ಖಾನೆ ಆರಂಭಿಸುತ್ತೇನೆ, ಯುವಕರಿಗೆ ಉದ್ಯೋಗ ಕೊಡಿಸುತ್ತೇನೆ ಇಲ್ಲದಿದ್ದರೆ ರಾಜಕೀಯ ನಿವೃತ್ತಿ ಪಡೆಯುವುದಾಗಿ ಹೇಳಿದ್ದ ವಿಚಾರದ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಪ್ರಶ್ನೆ ಕೇಳಿದ ಕಾರಣವನ್ನೇ ಉದ್ದೇಶವಾಗಿಟ್ಟುಕೊಂಡು ಹಲ್ಲೆ ನಡೆಸಲಾಗಿದೆ.

ಜಾಲತಾಣದಲ್ಲಿ ಪೋಸ್ಟ್ ಮಾಡಿರುವುದನ್ನು ಖಂಡಿಸಿ ಬೈಕ್‌ನಲ್ಲಿ ಬಂದಿದ್ದ ಮುಸುಕುಧಾರಿಗಳು ರವಿವಾರ ಬೆಳಗ್ಗೆ ಗೋಕುಲ್ ಕಾರಿನ ಮೇಲೆ ಹಲ್ಲೆ ನಡೆಸಿ ಗಾಜು ಒಡೆದಿದ್ದರು. ರಾತ್ರಿ ಕಿಡಿಗೇಡಿಗಳು ಗೋಕುಲ್ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆ ಮಾಡಿದ್ದು, ತಲೆ ಹಾಗೂ ಕಿವಿಗೆ ಗಾಯವಾಗಿದೆ. ಸರ್ಕಾರ ಈ ಪ್ರಕರಣದ ಗಂಭೀರತೆ ಅರಿತು ತಪ್ಪಿತಸ್ಥರು ಯಾರಿದ್ದಾರೆ ಅವರನ್ನು ಕೂಡಲೇ ಬಂಧಿಸಿ, ತನಿಖೆ ನಡೆಸಿ ಕಾನೂನು ರೀತಿಯಲ್ಲಿ ಕೂಡಲೇ ಕ್ರಮಕೈಗೊಳ್ಳಬೇಕು ಮತ್ತು ಇಂತಹ ಪ್ರಕರಣಗಳು ರಾಜ್ಯದಲ್ಲಿ ಮರುಕಳಿಸದಂತೆ ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳಿಗೆ ಸೂಕ್ತ ಎಚ್ಚರಿಕೆಯನ್ನು ನೀಡಬೇಕೆಂಬುದರ ಕುರಿತು.

ಉತ್ತರ: ಭದ್ರಾವತಿ ಬಿಜೆಪಿ ಕಾರ್ಯಕರ್ತ ಗೋಕುಲ್ ಕೃಷ್ಣ ಈತನ ಮೇಲೆ ನಡೆದ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಭದ್ರಾವತಿ ನ್ಯೂಟೌನ್ ಪೊಲೀಸ್ ಠಾಣೆಯಲ್ಲಿ 01 ಪ್ರಕರಣ ಮತ್ತು ಹಳೇನಗರ ಪೊಲೀಸ್ ಠಾಣೆಯಲ್ಲಿ 01 ಪ್ರಕರಣ ದಾಖಲಾಗಿದ್ದು, ಪ್ರಕರಣಗಳ ವಿವರ ಹೀಗಿದೆ:

**ಪ್ರಕರಣ–01:**

ದಿನಾಂಕ: 08.12.2023 ರಂದು ರಾತ್ರಿ ಗೋಕುಲ್ ಕೃಷ್ಣ ಇವರ ಮನೆಯ ಮುಂದೆ ನಿಲ್ಲಿಸಿದ್ದ ಕಾರನ್ನು ಜಖಂಗೊಳಿಸಿದ ಹಿನ್ನಲೆಯಲ್ಲಿ ಶ್ರೀ ಗೋಕುಲ್ ಕೃಷ್ಣ ಇವರ ತಂದೆ ಶ್ರೀ ಎ.ನಟರಾಜ್ ಇವರು ದಿನಾಂಕ: 09.12.2023 ರಂದು ನೀಡಿದ ದೂರಿನ ಮೇರೆಗೆ ನ್ಯೂಟೌನ್ ಪೊಲೀಸ್ ಠಾಣೆ ಪ್ರಕರಣ ಸಂಖ್ಯೆ 202/2023 ಕಲಂ 448. 427. 504. 506 ಸಹಿತ 34 ಐಪಿಸಿ ಮತ್ತು ಕಲಂ 2(ಎ) ಕರ್ನಾಟಕ ಪ್ರಿವೆನ್ಷನ್

..2

ಆಫ್ ಡಿಸ್ಟ್ರಕ್ಷನ್ & ಲಾಸ್ ಆಫ್ ಪ್ರಾಪರ್ಟಿ ಆಕ್ಟ್ 1981 ರೀತ್ಯಾ ಪ್ರಕರಣ ದಾಖಲಾಗಿದ್ದು, ಪ್ರಕರಣದಲ್ಲಿನ 03 ಜನ ಆರೋಪಿತರನ್ನು ವಶಕ್ಕೆ ಪಡೆದು, ದಸ್ತಗಿರಿ ಕ್ರಮ ಜರುಗಿಲಾಗಿದೆ. ಪ್ರಕರಣ ತನಿಖೆಯಲ್ಲಿರುತ್ತದೆ.

**ಪ್ರಕರಣ-02:**

ಗೋಕುಲ್ ಕೃಷ್ಣ ಇವರ ಮೇಲೆ ನಡೆದ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಭದ್ರಾವತಿ ಹಳೇನಗರ ಪೊಲೀಸ್ ಠಾಣೆಯಲ್ಲಿ ದಿನಾಂಕ: 11.12.2023 ರಂದು ಪ್ರಕರಣ ಸಂಖ್ಯೆ 195/2023 ಕಲಂ 504. 506. 323. 307 ಸಹಿತ 149 ಐಪಿಸಿ ರೀತ್ಯಾ 06 ಜನ ಆರೋಪಿತರ ವಿರುದ್ಧ ಪ್ರಕರಣ ದಾಖಲಾಗಿರುತ್ತದೆ. ಸದರಿ ಪ್ರಕರಣದಲ್ಲಿ 04 ಜನ ಆರೋಪಿತರನ್ನು ವಶಕ್ಕೆ ಪಡೆದು, ವಿಚಾರಣೆ ನಡೆಸಲಾಗುತ್ತಿರುತ್ತದೆ. ಪ್ರಕರಣ ತನಿಖೆಯಲ್ಲಿರುತ್ತದೆ.

ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆಗೆ ಭಂಗ ತರುವಂತಹ ಚಟುವಟಿಕೆಗಳ ಮೇಲೆ ಹಾಗೂ ಕಾನೂನು ಸುವ್ಯವಸ್ಥೆಗೆ ಭಂಗ ತರಬಹುದಾದಂತಹ ವ್ಯಕ್ತಿಗಳ ಮೇಲೆ ಸೂಕ್ತ ನಿಗಾವಹಿಸಿ, ಅಂತಹ ವ್ಯಕ್ತಿಗಳ ಮೇಲೆ ಮುಂಜಾಗ್ರತಾ ಕ್ರಮವಾಗಿ ಸಿಆರ್‌ಪಿಸಿ 107. 108. 109. 110 ರೀತ್ಯಾ ಪ್ರಕರಣಗಳನ್ನು ಜರುಗಿಸಿ, ಕಾನೂನು ಸುವ್ಯವಸ್ಥೆ ಕಾಪಾಡಲಾಗುತ್ತಿರುತ್ತದೆ. ಅಲ್ಲದೇ ಗಡಿಪಾರು, ಗೂಂಡಾ ಕಾಯ್ದೆ ಅಡಿಯಲ್ಲಿ ಹಲವಾರು ಪ್ರಕರಣಗಳನ್ನು ದಾಖಲಿಸಿ, ಕ್ರಮ ಕೈಗೊಂಡು ಕಾನೂನು ಸುವ್ಯವಸ್ಥೆಯನ್ನು ಕಾಪಾಡಲಾಗುತ್ತಿದೆ.

ಹೆಚ್‌ಡಿ 54 ಪಿಸಿಕ್ಯೂ 2023

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು